298 (25) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿಗೆ ಮಂಜೂರಾಗಿರುವ 220 ಕೆವಿ ವಿದ್ಯುತ್ ವಿತರಣೆ ಕೇಂದ್ರ ಯಾವ ಹಂತದಲ್ಲಿದೆ,

ಆ) ಯಾವಾಗ ಈ ವಿತರಣಾ ಕೇಂದ್ರ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಹಾಗೂ 220 ಕೆವಿ ಲೈನ್ ಇದರ ಜೊತೆಗೆ ಕಾಮಗಾರಿ ಕೆಲಸಗಳನ್ನು ಕೈಗೆತ್ತಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೇ,

ಇ) ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ವಿತರಣ ಕೇಂದ್ರಗಳಿಗೆ ವಿದ್ಯುಚ್ಛಕ್ತಿ ತೊಂದರೆ ಯಾದಾಗ ಬದಲಿ ಲೈನಿನಿಂದ ವಿದ್ಯುತ್ ಪಡೆಯುವ ವ್ಯವಸ್ಥೆಯನ್ನು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿಗೆ ಮಂಜೂರಾಗಿರುವ 220 ಕೆವಿ ವಿದ್ಯುತ್ ವಿತರಣಾ ಕೇಂದ್ರದ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ನಂಪೂರ್ಣಗೊಂಡಿದೆ ಕಾಮಗಾರಿಯ ಗುತ್ತಿಗೆಯನ್ನು ಗುತ್ತಿಗೆದಾರರಿಗೆ ಅತಿ ಶೀಘ್ರದಲ್ಲಿಯೇ ವಹಿಸಿಕೊಡಲಾಗುವುದು

ಆ) ವಿದ್ಯುತ್ ವಿತರಣಾ ಕೇಂದ್ರದ ನಿರ್ಮಾಣ ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಿಕೊಟ್ಟ ದಿನಾಂಕದಿಂದ 12 ತಿಂಗಳ ಕಾಲಾವಧಿಯಲ್ಲಿ ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ ಸದರಿ ವಿದ್ಯುತ್ ಕೇಂದ್ರ ಮತ್ತು ಇದಕ್ಕೆ ಸಂಬಂಧಿಸಿದ 220 ಕೆವಿ ವಿದ್ಯುತ್ ಪ್ರಸರಣ ಮಾರ್ಗದ ಕಾಮಗಾರಿಗಳೆರಡನ್ನು ಒಬ್ಬರೇ ಗುತ್ತಿಗೆದಾರರಿಗೆ ವಹಿಸಿಕೊಡಲಾಗುವುದರಿಂದ, ವಿದ್ಯುತ್ ವಿತರಣಾ ಕೇಂದ್ರದ ನಿರ್ಮಾಣ ಕಾರ್ಯದ ಜೊತೆಯಲ್ಲಿಯೇ 220 ಕೆವಿ ವಿದ್ಯುತ್ ಪ್ರಸರಣ ಮಾರ್ಗದ ನಿರ್ಮಾಣ ಕಾರ್ಯವನ್ನು ಸಹ ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ

ಇ) ಹೌದು, ಇದೆ